ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

(3) ವಿಧಾನ ಪರಿಷತ್

ಇಲಾಖೆ / ವಿಷಯ : DEPARTMENT / SUBJECT: Karnataka Legislative Council.

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 26/11/20

# ಪರಿಷತ್ ಸಭಾಪತಿ ವಿರುದ್ಧ ಬಿಜೆಪಿ ಅವಿಶ್ವಾಸ

26-11-20

ಸಂ.ಕ.ಸಮಾಚಾರ, ಬೆಂಗಳೂರು

ರಾಜ್ಯ ವಿಧಾನಪರಿಷತ್ತಿನಲ್ಲಿ ಬಿಜೆಪಿ ಬಲ ಹೆಚ್ಚಿರುವ ಹಿನ್ನೆಲೆಯಲ್ಲಿ ಪರಿಷತ್ತಿನ ಹಾಲಿ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ವಿರುದ್ಧ ಬಿಜೆಪಿ ಅವಿಶ್ವಾಸ ನಿರ್ಣಯ ಮಂಡಿಸಲು ನೋಟಿಸ್ ಜಾರಿ ಮಾಡಿದೆ.

ಡಿ.7ರಿಂದ ವಿಧಾನಮಂಡಲ ಅಧಿವೇಶನ ನಡೆಯಲಿರುವುದರಿಂದ ಬಿಜೆಪಿ ಈಗ ಸಭಾಪತಿ ಹುದ್ದೆಯನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳಲು ಮುಂದಾಗಿದೆ. ಬಿಜೆಪಿ ಹಾಗೂ ಜೆಡಿಎಸ್ ಒಂದಾಗಿ ಕಾಂಗ್ರೆಸ್ ವಶದಲ್ಲಿರುವ ಸಭಾಪತಿ ಹುದ್ದೆಯನ್ನು ತನ್ನ ತೆಕ್ಕೆಗೆ ಸೆಳೆದುಕೊಳ್ಳಲಿದೆ.

75 ಸದಸ್ಯತ್ವ ಬಲದ ವಿಧಾನಪರಿಷತ್ತಿನಲ್ಲಿ ಬಿಜೆಪಿ ಈಗ 30 ಸ್ಥಾನ ಹೊಂದಿದ್ದರೆ, ಜೆಡಿಎಸ್ ಬಳಿ 13 ಸ್ಥಾನಗಳಿವೆ. ಹೀಗಾಗಿ ಎರಡೂ ಪಕ್ಷಗಳ 43 ಮತಗಳಿಂದ ಕಾಂಗ್ರೆಸ್ ಪಕ್ಷದ ಮೂಲಕ ಸಭಾಪತಿಯಾಗಿರುವ ಪ್ರತಾಪಚಂದ್ರ ಶೆಟ್ಟಿ ವಿರುದ್ಧ ಅವಿಶ್ವಾಸ ಗೆಲ್ಲುವ ಸನ್ನಾಹದಲ್ಲಿದೆ. ಆದರೆ ಬಿಜೆಪಿ-ಜೆಡಿಎಸ್ ಹೊಂದಾಣಿಕೆಯ ಸಭಾಪತಿ ಅಭ್ಯರ್ಥಿ ಯಾರೆಂಬುದು ಈ ವರೆಗೂ ನಿರ್ಧಾರವಾಗಿಲ್ಲ. ಅಧಿವೇಶನಕ್ಕೆ ಮೊದಲೇ ಹೊಸ ಸಭಾಪತಿ ಯಾರೆಂಬುದನ್ನು ಬಿಜೆಪಿ ನಿರ್ಧರಿಸಲಿದೆ.